**Akashvani : Bangalore**
**Regional Bulletin In Kannada**
**21.03.2025 / 18.40 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**21.03.2025 / 18.40 hrs**
**<><*<><>*><>**

ಮುಖ್ಯಾಂಶಗಳು

**೧. ವಿಧಾನ ಸಭಾಧ್ಯಕ್ಷರ ಪೀಠಕ್ಕೆ ಅಗೌರವ ತೋರಿದ ಆರೋಪದಲ್ಲಿ ೧೮ ಬಿಜೆಪಿ ಶಾಸಕರ ಅಮಾನತು**

**೨. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ತಿದ್ದುಪಡಿ ವಿಧೇಯಕ-೨೦೨೫ ವಿಧಾನಸಭೆಯಲ್ಲಿಂದು ಅಂಗೀಕಾರ**

**೩. ಹನಿಟ್ರ್ಯಾಪ್ ಪ್ರಕರಣ; ಹೈಕೋರ್ಟ್‌ನ ಹಾಲಿ ನ್ಯಾಯಮೂರ್ತಿ ಅಥವಾ ಸಿಬಿಐನಿಂದ ತನಿಖೆಗೆ ಬಿಜೆಪಿ ಆಗ್ರಹ**

**೪. ರಾಜ್ಯಾದ್ಯಂತ ಮೊದಲ ದಿನ ಸುಸೂತ್ರವಾಗಿ ನಡೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆ**

**<><*<><>*><>**

ವಿಧಾನಸಭಾಧ್ಯಕ್ಷರ ಪೀಠಕ್ಕೆ ಅಗೌರವ ತೋರಿದ ಆರೋಪದ ಹಿನ್ನೆಲೆಯಲ್ಲಿ ೧೮ ಬಿಜೆಪಿ ಶಾಸಕರನ್ನು ೬ ತಿಂಗಳ ಮಟ್ಟಿಗೆ ಅಮಾನತು ಮಾಡಿ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಆದೇಶ ಹೊರಡಿಸಿದ್ದಾರೆ. ಶಾಸಕರಾದ ಡಾ.ಸಿ.ಎನ್.ಅಶ್ವತ್ಥನಾರಾಯಣ್, ಮುನಿರತ್ನ, ಬೈರತಿ ಬಸವರಾಜು, ಶರಣು ಸಲಗಾರ್, ದೊಡ್ಡಣ್ಣ ಗೌಡ ಪಾಟೀಲ್, ಸಿ.ಕೆ.ರಾಮಮೂರ್ತಿ, ಎಸ್.ಆರ್.ವಿಶ್ವನಾಥ್, ಎಂ.ಆರ್.ಪಾಟೀಲ್, ಚನ್ನಬಸಪ್ಪ, ಬಿ.ಸುರೇಶ್ ಗೌಡ, ಉಮನಾಥ್ ಕೋಟ್ಯಾನ್, ಶೈಲೇಂದ್ರ ಬೆಲ್ದಾಳೆ, ಯಶಪಾಲ್ ಸುವರ್ಣ, ಹರೀಶ್ ಬಿ.ಪಿ., ಡಾ.ಭರತ್ ಶೆಟ್ಟಿ, ಬಸವರಾಜ ಮತ್ತಿಮೋಡ್, ಧೀರಜ್ ಮುನಿರಾಜು, ಡಾ.ಚಂದ್ರು ಲಮಾಣಿ ಅಮಾನತುಗೊಂಡಿದ್ದಾರೆ.

**<><*<><>*><>**

ಕರ್ನಾಟಕ ಧನ ವಿನಿಯೋಗ ವಿಧೇಯಕ-೨೦೨೫, ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧಾರ ತಿದ್ದುಪಡಿ ವಿಧೇಯಕ-೨೦೨೫, ಕರ್ನಾಟಕ ಮಂತ್ರಿಗಳ ಸಂಬಳ ಮತ್ತು ಭತ್ಯೆಗಳ ತಿದ್ದುಪಡಿ ವಿಧೇಯಕ-೨೦೨೫ ಹಾಗೂ ಕರ್ನಾಟಕ ವಿಧಾನ ಮಂಡಲದ ಸಂಬಳ, ನಿವೃತ್ತಿ ವೇತನ ಮತ್ತು ಭತ್ಯೆಗಳು ತಿದ್ದುಪಡಿ ವಿಧೇಯಕ-೨೦೨೫ ವಿಧೇಯಕಗಳಿಗೆ ವಿಧಾನಸಭೆಯಲ್ಲಿಂದು ಅಂಗೀಕಾರ ದೊರೆಯಿತು. ಮುಖ್ಯಮಂತ್ರಿ ಸಿದ್ದರಾಮಯ್ಯ ಪರ್ಯಾಲೋಚಿಸಿ ಅಂಗೀಕರಿಸಲು ವಿಧಾನಭೆಯಲ್ಲಿ ಪ್ರಸ್ತಾವನೆಗಳು ಮಂಡಿಸಿದರು. ಪರ್ಯಾಲೋಚನೆ ನಂತರ ವಿಧೇಯಕಗಳು ಅಂಗೀಕಾರಗೊಂಡವು.

**<><*<><>*><>**

ಆಯವ್ಯಯ ಕೇವಲ ಅಂಕಿ ಸಂಖ್ಯೆಗಳ ಆಟವಲ್ಲ. ಇದು ೭ ಕೋಟಿ ಜನರ ಬದುಕಿನ ಉಸಿರಿನ ಪ್ರತೀಕ. ಆಯವ್ಯಯ ಸರ್ಕಾರದ ಧ್ಯೇಯೋದ್ದೇಶಗಳು, ಅಭಿವೃದ್ಧಿ ಕುರಿತದ್ದಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸಭೆಯಲ್ಲಿ ಪ್ರತಿಪಾದಿಸಿದ್ದಾರೆ. ವಿಧಾನಸಭೆಯಲ್ಲಿ ಇಂದು ೨೦೨೫-೨೬ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ನಡೆದ ಸಾಮಾನ್ಯ ಚರ್ಚೆಗೆ ಉತ್ತರ ನೀಡಿದ ಅವರು, ಆಯವ್ಯಯದಲ್ಲಿ ಮುಖ್ಯವಾಗಿ, ರಾಜ್ಯದ ಸಾಲ ಹಾಗೂ ಆರ್ಥಿಕ ಪರಿಸ್ಥಿತಿ, ಗ್ಯಾರಂಟಿ ಯೋಜನೆಗಳು, ಎಸ್‌ಸಿ, ಎಸ್‌ಪಿ ಮತ್ತು ಟಿಎಸ್‌ಪಿ ವಿಚಾರ, ಮುಸ್ಲಿಂ ಸಮುದಾಯಕ್ಕೆ ಗುತ್ತಿಗೆಯಲ್ಲಿ ಮೀಸಲಾತಿ, ಕ್ಷೇತ್ರಗಳಿಗೆ ಅಭಿವೃದ್ಧಿ ಅನುದಾನ ಹಾಗೂ ಪ್ರದೇಶವಾರು ಅಭಿವೃದ್ಧಿ ಕುರಿತಂತೆ ಚರ್ಚಿಸಲಾಗಿದೆ ಎಂದರು. ೨೦೨೫-೨೬ನೇ ಸಾಲಿನಲ್ಲಿ ೪ ಲಕ್ಷ ೯ ಸಾವಿರದ ೫೪೯ ಕೋಟಿ ರೂಪಾಯಿ ಗಾತ್ರದ ಆಯವ್ಯಯ ಮಂಡಿಸಲಾಗಿದೆ. ೨೦೨೪-೨೫ನೇ ಸಾಲಿನ ಆಯವ್ಯಯಕ್ಕೆ ಹೋಲಿಸಿದರೆ, ೨೦೨೫-೨೬ನೇ ಸಾಲಿನಲ್ಲಿ ರಾಜ್ಯದ ಆಯವ್ಯಯ ಗಾತ್ರ ಶೇಖಡ ೧೦.೩ ರಷ್ಟು ಹೆಚ್ಚಿನ ಬೆಳವಣಿಗೆ ಕಂಡಿದೆ ಎಂದು ತಿಳಿಸಿದರು. ಜನಸಂಖ್ಯೆಯ ಗಾತ್ರದಲ್ಲಿ

ರಾಜ್ಯವು ೮ನೇ ಸ್ಥಾನದಲ್ಲಿದೆ. ತೆರಿಗೆ ಸಂಗ್ರಹ ವಿಚಾರದಲ್ಲಿ ರಾಜ್ಯವು ೨ನೇ ಸ್ಥಾನದಲ್ಲಿದೆ. ಜಿಡಿಪಿಯಲ್ಲಿ ಕರ್ನಾಟಕವು ಮಹಾರಾಷ್ಟ್ರ, ತಮಿಳುನಾಡಿನ ನಂತರ ೩ನೇ ಸ್ಥಾನದಲ್ಲಿದೆ. ಆದರೆ, ೨೦೨೫-೨೬ನೇ ಸಾಲಿನ ಆಯವ್ಯಯವು ಉತ್ತರ ಪ್ರದೇಶ, ಮಹಾರಾಷ್ಟ್ರ, ರಾಜಸ್ಥಾನ, ತಮಿಳುನಾಡಿನ ನಂತರ ೫ನೇ ದೊಡ್ಡ ಆಯವ್ಯಯ ಆಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

<><*<><>*><>

ವಿಧಾನಸಭೆಯಲ್ಲಿಂದು ಗದ್ದಲದ ವಾತಾವರಣದ ನಡುವೆ ಸರ್ಕಾರಿ ಕಾಮಗಾರಿಗಳ ಗುತ್ತಿಗೆಯಲ್ಲಿ ಪ್ರವರ್ಗ ೨ 'ಬಿ' ಸೇರಿದವರಿಗೆ ಶೇಕಡ ೪ ರಷ್ಟು ಹಾಗೂ ಹಿಂದುಳಿದ ವರ್ಗಗಳಿಗೆ ಸರಕು ಮತ್ತು ಸೇವೆಗಳಲ್ಲಿ ಮೀಸಲಾತಿ ಕಲ್ಪಿಸುವ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ತಿದ್ದುಪಡಿ ವಿಧೇಯಕ-೨೦೨೫ ಅನ್ನು ವಿಧಾನಸಭೆಯಲ್ಲಿ ಅಂಗೀಕಾರಿಸಲಾಯಿತು. ಇದೇ ವೇಳೆ ವಿಧಾನಸಭೆಯ ಕಾರ್ಯಕಲಾಪಗಳನ್ನು ಅನಿರ್ದಿಷ್ಟಾವಧಿಗೆ ಮುಂದೂಡಲಾಯಿತು.

<><*<><>*><>

ವಿಧಾನ ಪರಿಷತ್‌ನಲ್ಲಿಂದು ಗದ್ದಲದ ವಾತಾವರಣ ನಿರ್ಮಾಣವಾಗಿತ್ತು.  ಕಾಂಗ್ರೆಸ್ ಸದಸ್ಯ ಪುಟ್ಟಣ್ಣ ಸದನದಲ್ಲಿ ಅಸಂಸದೀಯ ಪದವನ್ನು ಬಳಸಿದ್ದು, ಅವರನ್ನು ಸದನದಿಂದ ಹೊರಹಾಕಬೇಕೆಂದು ವಿಪಕ್ಷಗಳ ಸದಸ್ಯರು ಸಭಾಪತಿ ಬಸವರಾಜ ಹೊರಟ್ಟಿ ಅವರನ್ನು ಆಗ್ರಹಿಸಿ, ಸದನದ ಬಾವಿಗಿಳಿದು ಧರಣಿ ನಡೆಸಿದರು.  ಆಗ ಸಭಾಪತಿಗಳು, ಕಡತ ತರಿಸಿ, ಪುಟ್ಟಣ್ಣ ಅವರು ಹೇಳಿರುವ ಮಾತನ್ನು ಕಡತದಿಂದ ತೆಗೆದಿರುವುದಾಗಿ ಪ್ರಕಟಿಸಿದರು. ಆದಕ್ಕೂ ಒಪ್ಪದೇ ಪ್ರತಿಪಕ್ಷಗಳು ಧರಣಿ ಮುಂದುವರಿಸಿದವು. ಈ ಸಂದರ್ಭದಲ್ಲಿ ಪುಟ್ಟಣ್ಣ ಮಾತನಾಡಿ, ತಾವು ಅಸಂಸದೀಯ ಶಬ್ದ ಬಳಸಿಲ್ಲ ಎಂದು ಸ್ಪಷ್ಟನೆ ನೀಡಿದರು. ಭೋಜನ ವಿರಾಮದ ನಂತರ ಸದನ ಸಮಾವೇಶಗೊಂಡಾಗ ಬಿಜೆಪಿ, ಜೆಡಿಎಸ್ ಸದಸ್ಯರ ಧರಣಿ ಮುಂದುವರಿಯಿತು. ಈ ವೇಳೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಧ್ಯಪ್ರವೇಶಿಸಿ, ಧರಣಿ ಕೈಬಿಟ್ಟು, ಆಯವ್ಯಯದ ಮೇಲಿನ ಚರ್ಚೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಉತ್ತರ ನೀಡಲು ಅವಕಾಶ ಮಾಡಿಕೊಡಿ ಎಂದು ಮನವಿ ಮಾಡಿದರು. ಈ ನಡುವೆ ಪುಟ್ಟಣ್ಣ ಅವರು ತಾವು ಆಡಿದ ಮಾತಿನಿಂದ ವಿರೋಧ ಪಕ್ಷದ ನಾಯಕರಿಗೆ ನೋವಾಗಿದ್ದರೆ ವಿಷಾದ ವ್ಯಕ್ತಪಡಿಸುವುದಾಗಿ ಹೇಳಿದಾಗ ಪ್ರತಿಪಕ್ಷದ ಸದಸ್ಯರು ಧರಣಿ ಕೈಬಿಟ್ಟು, ಸುಗಮ ಕಲಾಪಕ್ಕೆ ಅನುವುಮಾಡಿದರು. ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಪೂರಕ ಅಂದಾಜುಗಳ ಮೂರನೇ ಹಾಗೂ ಅಂತಿಮ ಕಂತನ್ನು ಮಂಡಿಸಿ, ಸದಸ್ಯರು ಅಂಗೀಕಾರ ನೀಡಬೇಕೆಂದು ಕೋರಿದರು. ೧೩ ಸಾವಿರದ ೮೨೩ ಕೋಟಿ ೪೬ ಲಕ್ಷ ರೂಪಾಯಿಗಳನ್ನು ವಿವಿಧ ಬಾಬ್ತುಗಳಿಗೆ  ಒದಗಿಸಲಾಗಿದೆ ಎಂದು ಅಂಕಿ-ಅಂಶ ನೀಡಿದರು. ಬಳಿಕ ಸಭಾಪತಿ ಧ್ವನಿಮತಕ್ಕೆ ಹಾಕಿದಾಗ ಅಂಗೀಕಾರ ದೊರೆಯಿತು. ಇದೇ ವೇಳೆ, ಚರ್ಚೆಯ ನಂತರ ಕರ್ನಾಟಕ ಧನ ವಿನಿಯೋಗ ವಿಧೇಯಕ ೨೦೨೫ ಕ್ಕೂ ಅನುಮೋದನೆ ದೊರೆಯಿತು.

<><*<><>*><>

ಹನಿಟ್ರ್ಯಾಪ್ ಕುರಿತಂತೆ ಹೈಕೋರ್ಟ್ ಹಾಲಿ ಈಗಿನ ನ್ಯಾಯಮೂರ್ತಿಗಳಿಂದ ಅಥವಾ ಸಿಬಿಐನಿಂದ ತನಿಖೆ ನಡೆಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ.ವಿಜಯೇಂದ್ರ ಆಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಹಾಗೂ ದೇಶದ ೪೮ಕ್ಕೂ ಹೆಚ್ಚು ಪ್ರಮುಖರು ಹನಿಟ್ರ್ಯಾಪ್‌ಗೆ ಒಳಗಾಗಿದ್ದಾರೆ ಎಂದು ಸಚಿವ ರಾಜಣ್ಣ ಹೇಳಿದ್ದಾರೆ. ಇದೊಂದು ಗಂಭೀರ ಪ್ರಕರಣ. ಇದು ಸದನದ ೨೨೪ ಶಾಸಕರ, ರಾಜ್ಯದ ಗೌರವದ ಪ್ರಶ್ನೆ. ಬಿಜೆಪಿ ಹಾಗೂ ಜೆಡಿಎಸ್ ಒಟ್ಟಾಗಿ ಇದರ ವಿರುದ್ಧ ಪ್ರತಿಭಟನೆ ನಡೆಸುತ್ತದೆ ಎಂದು ತಿಳಿಸಿದರು.  ರಾಜ್ಯದಲ್ಲಿ ಅಲ್ಪಸಂಖ್ಯಾತರಿಗೆ ಸರ್ಕಾರಿ ಕಾಮಗಾರಿಗಳಲ್ಲಿ ಶೇಖಡ ೪ ಮೀಸಲಾತಿ ನೀಡುವ ಬಗ್ಗೆ ಮುಖ್ಯಮಂತ್ರಿಗಳು ಘೋಷಿಸಿದ್ದಾರೆ. ಇದರ ವಿರುದ್ಧ ರಾಜ್ಯಾದ್ಯಂತ ಜನಾಂದೋಲನ ನಡೆಸಲಾಗುವುದು ಎಂದು ಬಿ.ವೈ.ವಿಜಯೇಂದ್ರ ಹೇಳಿದರು. ಬಿಜೆಪಿ ಮತ್ತು ಜೆಡಿಎಸ್ ಮುಸ್ಲಿಂ ಸಮುದಾಯದ ವಿರೋಧಿಗಳಲ್ಲ. ಆದರೆ, ಹಿಂದೂಗಳಿಗೆ ಅಪಮಾನ ಮಾಡುವ ರೀತಿಯಲ್ಲಿ ಹಣಕಾಸು ಸಚಿವರು ಕೂಡ ಆಗಿರುವ  ಮುಖ್ಯಮಂತ್ರಿಗಳು ನಡೆದುಕೊಳ್ಳುತ್ತಿದ್ದಾರೆ. ಇದನ್ನು ನಾವು ವಿರೋಧಿಸುತ್ತೇವೆ ಎಂದರು. ವಿದೇಶಕ್ಕೆ ವಿದ್ಯಾಭ್ಯಾಸಕ್ಕೆ ಹೋಗುವ ಮುಸ್ಲಿಂ ವಿದ್ಯಾರ್ಥಿಯರಿಗೆ ನೀಡುವ ಮೊತ್ತವನ್ನು ರಾಜ್ಯ ಸರ್ಕಾರ ೨೦ ಲಕ್ಷದಿಂದ ೩೦ ಲಕ್ಷ ರೂಪಾಯಿಗಳಿಗೆ ಏರಿಸಿದ್ದಾರೆ. ಹಿಂದೂಗಳಲ್ಲಿ ಬಡವರಿಲ್ಲವೇ? ಅವರು ಹೊರದೇಶಕ್ಕೆ ವಿದ್ಯಾಭ್ಯಾಸಕ್ಕೆ ಹೋದರೆ ಅವರಿಗೆ ಹಣಕಾಸಿನ ಅವಶ್ಯಕತೆ ಇಲ್ಲವೇ? ಎಂದು ಬಿ.ವೈ.ವಿಜಯೇಂದ್ರ ಪ್ರಶ್ನಿಸಿದರು.

<><*<><>*><>

ಕನ್ನಡಪರ ಸಂಘಟನೆಗಳು ನಾಳೆ ಕರ್ನಾಟಕ ಬಂದ್‌ಗೆ ಕರೆ ನೀಡಿವೆ. ಮಹಾರಾಷ್ಟ್ರದಲ್ಲಿ ಕೆಎಸ್‌ಆರ್‌ಟಿಸಿ ಬಸ್ ಚಾಲಕನ ಮೇಲೆ ಇತ್ತೀಚೆಗೆ ನಡೆದ ಹಲ್ಲೆ ಹಾಗೂ ಬೆಳಗಾವಿಯಲ್ಲಿ ಮರಾಠಿ ಪರ ಸಂಘಟನೆಗಳಿಂದ ನಡೆದ ಕೃತ್ಯಗಳನ್ನು ವಿರೋಧಿಸಿ ಕನ್ನಡಪರ ಸಂಘಟನೆಗಳು ಬಂದ್‌ಗೆ ಕರೆ ನೀಡಿವೆ. ಈ ಬಂದ್‌ಗೆ ಕೆಲವು ಸಂಘಟನೆಗಳು ಮಾತ್ರ ಬೆಂಬಲ ನೀಡಿದ್ದು, ಹಲವು ಸಂಘಟನೆಗಳು ಕೇವಲ ನೈತಿಕ ಬೆಂಬಲ ನೀಡಿದ್ದಾರೆ. ಹೀಗಾಗಿ ಕೆಎಸ್‌ಆರ್‌ಟಿಸಿ, ಬಿಎಂಟಿಸಿ ಸೇರಿದಂತೆ ಮೆಟ್ರೋ ಸಂಚಾರ ಎಂದಿನಂತೆ ಇರುವ ಸಾಧ್ಯತೆಯಿದೆ. ಆಸ್ಪತ್ರೆಗಳು, ಔಷಧ ಅಂಗಡಿಗಳು ಎಂದಿನಂತೆ ತೆರೆಯಲಿದ್ದು, ಅಗತ್ಯ ವಸ್ತುಗಳ ವ್ಯಾಪಾರಕ್ಕೆ ಯಾವುದೇ ತೊಂದರೆ ಇರುವುದಿಲ್ಲ.

**<><*<><>*><>**

ಇಂದು ನಡೆದ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆ-೧ರ ಪ್ರಥಮ ಭಾಷೆ ವಿಷಯದ ಪರೀಕ್ಷೆಗೆ ಚಿತ್ರದುರ್ಗ ಜಿಲ್ಲೆಯಲ್ಲಿ ಒಟ್ಟು ೨೨ ಸಾವಿರ ೨೨೯ ವಿದ್ಯಾರ್ಥಿಗಳು ಹಾಜರಾಗಿದ್ದು, ೯೪೩ ವಿದ್ಯಾರ್ಥಿಗಳು ಗೈರಾಗಿದ್ದಾರೆ. ಜಿಲ್ಲೆಯ ೮೨ ಪರೀಕ್ಷೆ ಕೇಂದ್ರಗಳಲ್ಲಿ ಪರೀಕ್ಷೆ ಸುಗಮವಾಗಿ ನಡೆಯಿತು ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಆರ್.ಮಂಜುನಾಥ್ ತಿಳಿಸಿದ್ದಾರೆ. ಧಾರವಾಡ ಜಿಲ್ಲೆಯಲ್ಲಿ ೨೮ ಸಾವಿರದ ೬೬೬ ವಿದ್ಯಾರ್ಥಿಗಳು ನೋಂದಣಿ ಮಾಡಿಕೊಂಡಿದ್ದಾರೆ. ೧೦೬ ಪರೀಕ್ಷಾ ಕೇಂದ್ರಗಳನ್ನು ತೆರಯಲಾಗಿದೆ. ಇಂದು ೨೮ ಸಾವಿರದ ೨೩೯ ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, ೪೨೭ ವಿದ್ಯಾರ್ಥಿಗಳು ಪರೀಕ್ಷೆಗೆ ಗೈರು ಹಾಜರಾಗಿದ್ದಾರೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಹೇಳಿದ್ದಾರೆ. ವಿಜಯಪುರ ಜಿಲ್ಲೆಯ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ಇಂದು ಜರುಗಿದ ಎಸ್.ಎಸ್.ಎಲ್.ಸಿ. ಭಾಷಾ ಪರೀಕ್ಷೆಗೆ ೪೧ ಸಾವಿರದ ೨೭೬ ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದು, ಈ ಪೈಕಿ ೪೦ ಸಾವಿರದ ೧೮೭ ವಿದ್ಯಾರ್ಥಿಗಳು ಹಾಜರಾಗಿದ್ದು, ೧ ಸಾವಿರದ ೮೯ ವಿದ್ಯಾರ್ಥಿಗಳು ಗೈರು ಹಾಜರಾಗಿದ್ದರು ಎಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ. ಕೋಲಾರ ಜಿಲ್ಲೆಯ ೬೫ ಕೇಂದ್ರಗಳಲ್ಲಿ ಇಂದು ನಡೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ೧೯ ಸಾವಿರದ ೭೦೬ ವಿದ್ಯಾರ್ಥಿಗಳು ಹೆಸರು ನೊಂದಾಯಿಸಿಕೊಂಡಿದ್ದು, ಈ ಪೈಕಿ ೧೯ ಸಾವಿರಸ ೩೩೧ ಮಂದಿ ಹಾಜರಾಗಿದ್ದು, ೩೭೫ ಮಂದಿ ಮಂದಿ ಗೈರಾಗಿದ್ದರು ಎಂದು ಡಿಡಿಪಿಐ ಕೃಷ್ಣಮೂರ್ತಿ ತಿಳಿಸಿದ್ದಾರೆ.

**<><*<><>*><>**

ಕಾಳುಮೆಣಸಿನ ಉತ್ಪಾದನೆಯಲ್ಲಿ ಮುಂಚೂಣಿಯಲ್ಲಿರುವ ಶಿರಸಿ ಮಾರುಕಟ್ಟೆ ದರವನ್ನು ಸಾಂಬಾರ್ ಪದಾರ್ಥಗಳ ಮಂಡಳಿಯ ದರಪಟ್ಟಿಯಲ್ಲಿ ದಾಖಲಿಸಲು ಕೇಂದ್ರ ವಾಣಿಜ್ಯ ಸಚಿವ ಪಿಯೂಷ್ ಗೋಯಲ್ ಒಪ್ಪಿಗೆ ನೀಡಿದ್ದಾರೆ. ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಕೇಂದ್ರ ಸಚಿವರಿಗೆ ಧನ್ಯವಾದ ಸಲ್ಲಿಸಿದ್ದಾರೆ.

**<><*<><>*><>**

ಇನ್ನು ಹವಾವರ್ತಮಾನ,

ರಾಜ್ಯದ ಹಲವೆಡೆ ಮುಂದಿನ ೫ ದಿನಗಳಲ್ಲಿ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಉಡುಪಿ, ದಕ್ಷಿಣ ಕನ್ನಡ, ಬೆಂಗಳೂರು, ಬೆಂಗಳೂರು ಗ್ರಾಮಾಂತರ, ವಿಜಯಪುರ, ಕಲಬುರಗಿ, ಬೀದರ್, ರಾಯಚೂರು, ಕೊಪ್ಪಳ, ಯಾದಗಿರಿ, ಚಿಕ್ಕಮಗಳೂರು, ಕೊಡಗು, ಹಾಸನ, ಬಳ್ಳಾರಿ, ವಿಜಯನಗರ, ಚಿತ್ರದುರ್ಗ, ಚಾಮರಾಜನಗರ, ಮೈಸೂರು ಮತ್ತು ಶಿವಮೊಗ್ಗ ಜಿಲ್ಲೆಗಳ ಕೆಲವೆಡೆ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಇಲಾಖೆ ತಿಳಿಸಿದೆ. ರಾಜ್ಯದಲ್ಲಿ ಇಂದು ಕಲಬುರಗಿಯಲ್ಲಿ ಗರಿಷ್ಠ ತಾಪಮಾನ ೩೯.೬ ಹಾಗೂ ಚಾಮರಾಜನಗರದಲ್ಲಿ ಕನಿಷ್ಠ ತಾಪಮಾನ ೧೮.೪ ಡಿಗ್ರಿ ಸೆಲ್ಸಿಯೆಸ್ ದಾಖಲಾಗಿದೆ. ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರು ಸುತ್ತಮುತ್ತ ಭಾಗಶಃ ಮೋಡಕವಿದ ವಾತಾವರಣವಿರಲಿದ್ದು, ಗರಿಷ್ಠ ೩೪, ಕನಿಷ್ಠ ೨೨ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**